ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು

ಸಿ.ಸಿ.1492/2016

| | | | |
|---|---|---|---|
| ಸಾಕ್ಷಿದಾರರ ಹೆಸರು | ಗೋವಿಂದಪ್ಪ | ಪ್ರಮಾಣ ಮಾಡಿದ ದಿನಾಂಕ | 10.01.2023 |
| ತಂದೆಯ ಹೆಸರು | ತಿಮ್ಮಯ್ಯ | | |
| ವಯಸ್ಸು | 34 ವರ್ಷ | | |
| ವೃತ್ತಿ | ಗಾರೆ ಕೆಲಸ | ಚಾಸಾ | 5 |
| ವಾಸಸ್ಥಳ | ಕಡೂರು | ಪ್ರಾಸಾ | 5 |

**<u>ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-</u>**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಅಮಾನತ್ತು ಮಹಜರ್ ಆಗಿದ್ದು ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರ್ತಿಸಿದ್ದು ಅದನ್ನು ನಿಪಿ-6 ಎಂದು ಈಗಾಗಲೇ ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ 6(ಬಿ) ಎಂದು ಗುರ್ತಿಸಲಾಯಿತು. ನಿಪಿ-6 ಕ್ಕೆ ಯಾವಾಗ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ-6 ಕ್ಕೆ ಯಾವ ವಿಚಾರವಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ-6 ಕ್ಕೆ ಬೇರೆ ಯಾರು ಸಹಿ ಮಾಡಿರುತ್ತಾರೆ ಮತ್ತು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗು ಬರೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಿಪಿ-6 ಕ್ಕೆ ಪೋಲಿಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿ ಅದು ಆರೋಪಿತರು ಕೃತ್ಯ ನೆಡದ ಸ್ಥಳವನ್ನು ತೋರಿಸಿದ ಸ್ಥಳದಲ್ಲಿ ಜರುಗಿಸಿದ ಮಹಜರ್ ಆಗಿದ್ದು ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರ್ತಿಸಿದ್ದು ಅದನ್ನು ನಿಪಿ-7 ಎಂದು ಈಗಾಗಲೇ ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ 7(ಬಿ) ಎಂದು ಗುರ್ತಿಸಲಾಯಿತು. ನಿಪಿ-7 ಕ್ಕೆ ಯಾವಾಗ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ-7 ಕ್ಕೆ ಯಾವ ವಿಚಾರವಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ-7 ಕ್ಕೆ ಬೇರೆ ಯಾರು ಸಹಿ ಮಾಡಿರುತ್ತಾರೆ ಮತ್ತು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗು ಬರೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)**

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ 31.12.2015 ರಂದು ಚಾಸಾ-7 ರಿಂದ 11 ರವರು ಆರೋಪಿತರನ್ನು ಹಾಗೂ ಎರಡು ಟಿವಿಯನ್ನು, ಎರಡು ಬೈಕುಗಳನ್ನು ಒಂದು ಪ್ಲಾಸ್ಟಿಕ್ ಚೀಲವನ್ನು ಚಾಸಾ-14 ರವರ ಸಮಕ್ಷಮ ಹಾಜರುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಅಮಾನತ್ತುಪಡಿಸಿಕೊಳ್ಳಲು ಪಂಚರಾಗಬೇಕೆಂದು ಚಾಸಾ-14 ರವರು ಕೋರಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರನ್ನು ಬೆಳಗ್ಗೆ 6.15 ರಿಂದ 7.00 ರವರೆಗೆ ನಮ್ಮ ಸಮಕ್ಷಮ ಎಲ್ ಸಿ ಡಿ ಎರಡು ಟಿವಿಗಳು, ಎರಡು ಬೈಕುಗಳನ್ನು ಒಂದು ಪ್ಲಾಸ್ಟಿಕ್ ಚೀಲವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿತರು ಹಾಗೂ ಚಾಸಾ-5 ರವರು ಸಹ ಹಾಜರಿದ್ದರು ಎಂದರೆ ಸರಿಯಲ್ಲ. ಚಾಸಾ-5 ರವರು ನಿಪಿ-6 ಕ್ಕೆ ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಆರೋಪಿತರು ಚಾಸಾ-14 ರವರಿಗೆ ಗಲಾಟೆ ಮಾಡಿದ ಸ್ಥಳವನ್ನು ತೋರಿಸಿದ ಕುರಿತು ಬೆಳಗ್ಗೆ 8.00 ರಿಂದ 8.45 ಗಂಟೆಯವರೆಗೆ ನಿಪಿ-7 ರಂತೆ ಮಹಜರ್ ಕ್ರಮಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು, ಚಾಸಾ-5 ಆರೋಪಿತರು ಹಾಗೂ ಚಾಸಾ-14 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿ-6 ಮತ್ತು 7 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರು ಯಾವುದೇ ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು